# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ | : | 2150 (24464) |
| ಸದಸ್ಯರ ಹೆಸರು | : | ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ |
| ಉತ್ತರಿಸಬೇಕಾದ ದಿನಾಂಕ | : | 27.03.2026 |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಆನೇಕಲ್ ಮತ ಕ್ಷೇತ್ರ ವ್ಯಾಪ್ತಿಯಲ್ಲಿ ಜಿಲ್ಲಾ ಪಂಚಾಯತ್ ಗ್ರಾಮೀಣ ರಸ್ತೆಗಳು ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಅತಿವೃಷ್ಠಿ, ವಾಹನದಟ್ಟಣೆ, ಭಾರಿ ವಾಹನ ಸಂಚಾರ ಮುಂತಾದ ಕಾರಣಗಳಿಂದ ಕೆಲವೊಂದು ರಸ್ತೆಗಳಿಗೆ ಹಾನಿಯಾಗಿರುತ್ತದೆ |
| ಆ) | ಗ್ರಾಮೀಣ ರಸ್ತೆಗಳ ಅಭಿವೃದ್ಧಿಗೆ ಎಷ್ಟು ಪ್ರಸ್ತಾವನೆಗಳು ಬಂದಿರುತ್ತದೆ; | ಆನೇಕಲ್ ವಿಧಾನಸಭಾ ಕ್ಷೇತ್ರದ ಗ್ರಾಮೀಣ ರಸ್ತೆಗಳನ್ನು ಅಭಿವೃದ್ಧಿ ಪಡಿಸಲು ರೂ. 37.00 ಕೋಟಿಗಳನ್ನು ಮಂಜೂರು ಮಾಡುವಂತೆ ಪ್ರಸ್ತಾವನೆಗಳು ಬಂದಿರುತ್ತದೆ. |
| ಇ) | ಕಳೆದ 3 ವರ್ಷಗಳಿಂದ ಗ್ರಾಮೀಣ ರಸ್ತೆ ಅಭಿವೃದ್ಧಿಗೆ ನೀಡಿರುವ ಅನುದಾನ ಎಷ್ಟು; (ವಿವರ ನೀಡುವುದು) | ಆನೇಕಲ್ ವಿಧಾನಸಭಾ ಕ್ಷೇತ್ರ ವ್ಯಾಪ್ತಿಗೆ 2023-24, 2024-25 ಮತ್ತು 2025-26ನೇ ಸಾಲಿನಲ್ಲಿ ಒದಗಿಸಲಾದ ಅನುದಾನದ ವಿವರಗಳು ಕೆಳಕಂಡಂತಿವೆ: (ರೂ. ಲಕ್ಷಗಳಲ್ಲಿ) |

(ರೂ. ಲಕ್ಷಗಳಲ್ಲಿ)

| ಕ್ರ. ಸಂ. | ಯೋಜನೆ | 2023-24 | 2024-25 | 2025-26 |
|---|---|---|---|---|
| 01 | 3054- ಸಿಎಂಜಿಎಸ್‌ವೈ | 88.52 | 88.52 | 88.52 |
| 02 | 3054- ಟಾಸ್ಕ್ ಫೋರ್ಸ್ | 88.52 | 88.52 | 0.00 |
| 03 | 5054- ಗ್ರಾಮೀಣ ರಸ್ತೆಗಳು (ಮಳೆ ಪರಿಹಾರ ಮತ್ತು ಮಾನ್ಯ ಮುಖ್ಯಮಂತ್ರಿಗಳ ವಿಶೇಷ ಮಂಜೂರಾತಿ ಕಾರ್ಯಕ್ರಮ | 4100.00 | 1000.00 | 279.50 |
| 04 | ಎಸ್‌ಸಿಪಿ ಮತ್ತು ಟಿಎಸ್‌ಪಿ | 100.00 | 250.00 | 200.00 |
| 05 | 5054 - CMIDP | 0.00 | 0.00 | 5000.00 |
| | **ಒಟ್ಟು** | **4377.04** | **1427.04** | **5656.54** |

<table>
<tr>
<td></td>
<td></td>
<td>ಇದಲ್ಲದೇ, ಪ್ರಗತಿಪಥ ಯೋಜನೆಯಡಿ ಆನೇಕಲ್ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಗ್ರಾಮೀಣ ರಸ್ತೆಗಳನ್ನು ಅಭಿವೃದ್ಧಿ ಪಡಿ..ಲು ಅನುದಾನ ಹಂಚಿಕೆ ಮಾಡಲಾಗಿದ್ದು, ಯೋಜನೆಯ ಅನುಷ್ಠಾನದ ಪ್ರಕ್ರಿಯೆಯು ಪ್ರಗತಿಯಲ್ಲಿದೆ.</td>
</tr>
<tr>
<td>ಈ)</td>
<td>ಆನೇಕಲ್ ತಾಲ್ಲೂಕಿನ ಗ್ರಾಮಗಳಿಗೆ ಇನ್ನೂ ಕುಡಿಯುವ ನೀರಿನ ಸಂಪರ್ಕ ಇಲ್ಲದಿರುವುದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?</td>
<td>ಆನೇಕಲ್ ತಾಲ್ಲೂಕಿನ ಕೆಲವು ಗ್ರಾಮಗಳಲ್ಲಿ ಕುಡಿಯುವ ನೀರಿನ ಪೈಪ್ ಸಂಪರ್ಕಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆ.<br><br>ಪ್ರಸ್ತುತ ಜಲ ಜೀವನ್ ಮಿಷನ್ ಯೋಜನೆಯಡಿ ಆನೇಕಲ್ ತಾಲ್ಲೂಕಿನ ಎಲ್ಲಾ ಗ್ರಾಮಗಳಿಗೆ ಗೃಹ ಸಂಪರ್ಕದ ಮೂಲಕ ಕುಡಿಯುವ ನೀರು ಒದಗಿಸುವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ. ಬಹುತೇಕ ಗ್ರಾಮಗಳಲ್ಲಿ ನೀರು ಸರಬರಾಜು ವ್ಯವಸ್ಥೆ ಜಾರಿಯಲ್ಲಿದ್ದು, ಕೆಲವು ಗ್ರಾಮಗಳಲ್ಲಿ ಕಾಮಗಾರಿಗಳು ಪ್ರಗತಿಯಲ್ಲಿವೆ. ಉಳಿದಿರುವ ಕಾಮಗಾರಿಗಳನ್ನು ತ್ವರಿತವಾಗಿ ಪೂರ್ಣಗೊಳಿಸಿ ಎಲ್ಲಾ ಗ್ರಾಮಗಳಿಗೆ ಕುಡಿಯುವ ನೀರಿನಸಂಪರ್ಕವನ್ನು ಒದಗಿಸಲು ಕ್ರಮ ವಹಿಸಬೇಕಿದೆ.<br><br>
<table>
<tr><th>ಒಟ್ಟು ಕಾಮಗಾರಿಗಳು</th><th>ಪ್ರಾರಂಭಿಸಬೇಕಾಗಿರುವ ಕಾಮಗಾರಿಗಳು</th><th>ಪ್ರಗತಿಯಲ್ಲಿರುವ ಕಾಮಗಾರಿಗಳು</th><th>ಪೂರ್ಣಗೊಂಡಿರುವ ಕಾಮಗಾರಿಗಳು</th><th>ಹರ್‌ಘರ್ ಘೋಷಣೆಯಾದ ಕಾಮಗಾರಿಗಳು</th></tr>
<tr><td>276</td><td>2</td><td>113</td><td>161</td><td>109</td></tr>
</table>
</td>
</tr>
</table>

**ಕಡತ ಸಂಖ್ಯೆ: ಕಪ್ರಿಶ:158ನೇಅ:2026**

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ
ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ
ತಂತ್ರಜ್ಞಾನ ಸಚಿವರು.